ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ - ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 5/1/21

# ವಿಚಾರಣೆಗೆ ಮರಿತಿಬ್ಬೇಗೌಡ ನೇತೃತ್ವದಲ್ಲಿ ಸದನ ಸಮಿತಿ

ಪ್ರ.ವಾ. 5-1-2021

ಬೆಂಗಳೂರು: ಪರಿಷತ್ ಅಧಿವೇಶನದಲ್ಲಿ ನಡೆದ ಅಹಿತಕರ ಘಟನೆ ಕುರಿತು ವಿಚಾರಣೆ ನಡೆಸಲು ಜೆಡಿಎಸ್ ಸದಸ್ಯ ಮರಿತಿಬ್ಬೇಗೌಡ ಅಧ್ಯಕ್ಷತೆಯಲ್ಲಿ ಐವರು ಸದಸ್ಯರ ಸದನ ಸಮಿತಿ ರಚಿಸಿ ಸಭಾಪತಿ ಕೆ. ಪ್ರತಾಪಚಂದ್ರ ಶೆಟ್ಟಿ ಅವರು ಸೋಮವಾರ ಆದೇಶ ಹೊರಡಿಸಿದ್ದಾರೆ.

ಕಾಂಗ್ರೆಸ್ ಸದಸ್ಯರಾದ ಬಿ.ಕೆ. ಹರಿಪ್ರಸಾದ್, ಆರ್.ಬಿ. ತಿಮ್ಮಾಪೂರ ಮತ್ತು ಬಿಜೆಪಿ ಸದಸ್ಯರಾದ ಎಚ್. ವಿಶ್ವನಾಥ್ ಹಾಗೂ ಎಸ್.ವಿ. ಸಂಕನೂರ ಅವರನ್ನು ಸಮಿತಿಯ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ. ಬಿಜೆಪಿ ಮತ್ತು ಕಾಂಗ್ರೆಸ್ ಸದಸ್ಯರು ನೀಡಿದ್ದ ದೂರುಗಳ ಆಧಾರದಲ್ಲಿ ಸದನ ಸಮಿತಿ ರಚಿಸಿದ್ದು, ವಿಚಾರಣೆ ಪೂರ್ಣಗೊಳಿಸಿ, ವರದಿ ಸಲ್ಲಿಸಲು 20 ದಿನಗಳ ಕಾಲಾವಕಾಶ ನೀಡಲಾಗಿದೆ ಎಂದು ವಿಧಾನ ಪರಿಷತ್ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮಿ ತಿಳಿಸಿದ್ದಾರೆ.